ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ನ್ಯಾಯಾಲಯ, ಲಕ್ಷ್ಮೇಶ್ವರ

ಚಾಸಾ: 12 ಪ್ರಾಸಾ : 8

| | | |
|---|---|---|
| ಸಾಕ್ಷಿಯ ಹೆಸರು | : | ಎ. ಎಲ್. ಕರ್ಜಗಿ |
| ವಯಸ್ಸು | : | 48 ವರ್ಷ |
| ಉದ್ಯೋಗ | : | ಮಹಿಳಾ ಮುಖ್ಯಪೇದೆ |
| ವಿಳಾಸ | : | ಲಕ್ಷ್ಮೇಶ್ವರ |

ದಿನಾಂಕಃ **03.01.2026** ರಂದು ಸಾಕ್ಷಿಯನ್ನು ಕರೆಯಿಸಲಾಯಿತು ಮತ್ತು ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ- ಮಾನ್ಯ ಸಸಅ ರವರಿಂದ

ನಾನು 26.02.2022 ರಿಂದ ಇಲ್ಲಿಯವರೆಗೆ ಲಕ್ಷ್ಮೇಶ್ವರ ಪೋಲಿಸ ಠಾಣೆಯಲ್ಲಿ ಮಾಹಿಳಾ ಮುಖ್ಯಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 23.02.2024 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾ-1 ರವರು ಲಿಖಿತ ದೂರನ್ನು ನೀಡಿದ್ದು, ಅದನ್ನು ಸ್ವೀಕರಿಸಿ ನಮ್ಮ ಠಾಣಾ ಮೊಕದ್ದಮೆ ಸಂಖ್ಯೆ 16/2024 ರಂತೆ ಪ್ರ.ವ. ವರದಿಯನ್ನು ತಯಾರಿಸಿ, ಮಾನ್ಯ ನ್ಯಾಯಾಲಯಕ್ಕೆ ನಮ್ಮ ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟಿರುತ್ತೇನೆ. ದೂರನ್ನು ಈಗಾಗಲೇ ನಿಪಿ.1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ.1 (ಬಿ) ಎಂದು ಗುರುತಿಸಲಾಯಿತು. ಪ್ರ.ವ. ವರದಿಯನ್ನು ನಿಪಿ.11 ಎಂದು, ಸಾಕ್ಷಿಯ ಸಹಿಯನ್ನು ನಿಪಿ.11 (ಎ) ಎಂದು ಗುರುತಿಸಲಾಯಿತು. ಮುಂದಿನ ತನಿಖೆಗಾಗಿ ಚಾಸಾ-13 ರವರಿಗೆ ಕಡತವನ್ನು ಹಸ್ತಾಂತರಿಸಿರುತ್ತೇನೆ.

ಪಾಟೀ ಸವಾಲುಃ- ಆರೋಪಿತರ ಪರವಾಗಿ Sri. VRP, ವಕೀಲರಿಂದ

ದಿಃ 23.02.2024 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾ-1 ರವರು ಲಿಖಿತ ದೂರನ್ನು ನೀಡಿರುತ್ತಾರೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸ್ವೀಕರಿಸಿ ನಮ್ಮ ಠಾಣಾ ಮೊಕದ್ದಮೆ

ಸಂಖ್ಯೆ 16/2024 ರಂತೆ ಪ್ರ.ವ. ವರದಿಯನ್ನು ತಯಾರಿಸಿ, ಮಾನ್ಯ ನ್ಯಾಯಾಲಯಕ್ಕೆ ನಮ್ಮ ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಮುಂದಿನ ತನಿಖೆಗಾಗಿ ಚಾಸಾ-13 ರವರಿಗೆ ಕಡತವನ್ನು ಹಸ್ತಾಂತರಿಸಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆ ಇಲ್ಲ</u>

(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓದಿ. ಹೇ. ಕೇ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ಲಕ್ಷ್ಮೇಶ್ವರ